**All India Radio: Bangalore**
**National Bulletin In Kannada**
**07.12.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.12.2025  19.35 p.m.**

**<><><><>**

ಮುಖ್ಯಾಂಶಗಳು

1. ವಂದೇ ಮಾತರಂ ಗೀತೆಯ ೧೫೦ನೇ ವರ್ಷಾಚರಣೆ ಹಿನ್ನೆಲೆ - ಲೋಕಸಭೆಯಲ್ಲಿ ನಾಳೆ ಪ್ರಧಾನಮಂತ್ರಿಯವರಿಂದ ವಿಶೇಷ ಚರ್ಚೆ
2. ಮುಂದುವರಿದ ಇಂಡಿಗೋ ವಿಮಾನ ಸಂಚಾರ ವಿಳಂಬ: ವಿಮಾನಯಾನ ಸಂಸ್ಥೆಯೊಂದಿಗೆ ಸಂಪರ್ಕದಲ್ಲಿರಲು ಪ್ರಯಾಣಿಕರಿಗೆ ಸೂಚನೆ
3. ಕರ್ನಾಟಕ ವಿಧಾನಮಂಡಲದ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ನಾಳೆಯಿಂದ ಆರಂಭ: ಸಕಲ ಸಿದ್ಧತೆ
4. ಚೆನ್ನೈನಲ್ಲಿಂದು ಎಫ್‌ಐಹೆಚ್ ಪುರುಷರ ಹಾಕಿ ಜೂನಿಯರ್ ವಿಶ್ವಕಪ್ ಪಂದ್ಯಾವಳಿ : ಭಾರತ ಮತ್ತು ಜರ್ಮನಿ ಮುಖಾಮುಖಿ

<><><><>

'ವಂದೇ ಮಾತರಂ' ಗೀತೆಯ ೧೫೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಲೋಕಸಭೆಯಲ್ಲಿ ವಿಶೇಷ ಚರ್ಚೆ ನಡೆಸಲಿದ್ದಾರೆ. ದೇಶಭಕ್ತಿ ಗೀತೆಗೆ ಸಂಬಂಧಿಸಿದ ಅಷ್ಟೇನೂ ಜನಪ್ರಿಯವಲ್ಲದ ಅಂಶಗಳನ್ನು ತಿಳಿಸುವ ಕಾರ್ಯಕ್ರಮದ ಭಾಗವಾಗಿ ಈ ಚರ್ಚೆ ನಡೆಯಲಿದೆ. ಬಂಕಿಮ್ ಚಂದ್ರ ಚಟರ್ಜಿ ಅವರು ಬರೆದ ಈ ಗೀತೆ ೧೮೭೫ರ ನವೆಂಬರ್ ೭ರಂದು ಬಂಗದರ್ಶನ್ ನಿಯತಕಾಲಿಕೆಯಲ್ಲಿ ಮೊದಲ ಬಾರಿಗೆ ಪ್ರಕಟವಾಗಿದ್ದು, ಈ ಗೀತೆ ಸ್ವಾತಂತ್ರ್ಯ ಹೋರಾಟಕ್ಕೆ ನೀಡಿದ ಪ್ರೇರಣೆ, ಅದರ ಐತಿಹಾಸಿಕ ಮಹತ್ವ ಮತ್ತು ಪ್ರಸ್ತುತತೆಯ ಬಗ್ಗೆ ಪ್ರಧಾನಮಂತ್ರಿ ವಿವರಿಸಲಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಮಧ್ಯಾಹ್ನ ೧೨ ಗಂಟೆಗೆ ದಿನವಿಡೀ ಚರ್ಚೆ ಆರಂಭವಾಗಲಿದೆ. ಮಂಗಳವಾರದಂದು ಲೋಕಸಭೆಯಲ್ಲಿ ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ನಡೆಯಲಿದೆ ಎಂದರು.

<><><><>

ಮಾನವ ಹಕ್ಕುಗಳ ದಿನದ ಅಂಗವಾಗಿ ಇದೇ ೧೦ ರಂದು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ - ಎನ್‌ಎಚ್‌ಆರ್‌ಸಿ ಏರ್ಪಡಿಸಿರುವ 'ಎಲ್ಲರಿಗೂ ಘನತೆ' ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ ಮಾಡಲಿದ್ದಾರೆ. ಎಲ್ಲರಿಗೂ ಮೂಲಭೂತ ಸೌಕರ್ಯ, ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಘನತೆ ಖಾತರಿಪಡಿಸುವಲ್ಲಿ ಸ್ಪಂದಿಸುವ ಆಡಳಿತ ಮತ್ತು ದಕ್ಷ ಸಾರ್ವಜನಿಕ ಸೇವಾ ವಿತರಣೆಯು ಪ್ರಮುಖ ಪಾತ್ರ ವಹಿಸುತ್ತದೆ ಎಂಬ ಬಗ್ಗೆ ರಾಷ್ಟ್ರಪತಿಯವರು ವಿವರಿಸುವ ನಿರೀಕ್ಷೆಯಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ. 'ದೈನಂದಿನ ಅಗತ್ಯತೆಗಳು' ಎಂಬುದು ಈ ವರ್ಷದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ದಿನದ ವಿಷಯಕ್ಕೆ ಅನುಗುಣವಾಗಿ ಎನ್‌ಎಚ್‌ಆಆರ್‌ಸಿ 'ದೈನಂದಿನ ಅಗತ್ಯಗಳ ಖಾತರಿ: ಸಾರ್ವಜನಿಕ ಸೇವೆಗಳು ಮತ್ತು ಎಲ್ಲರಿಗೂ ಘನತೆ' ಕುರಿತು ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಿದೆ. ಮೂಲಭೂತ ಸೌಕರ್ಯಗಳಿಗೆ ಏಕರೂಪದ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲರಿಗೂ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಘನತೆಯ ಸಾಂವಿಧಾನಿಕ ಭರವಸೆಯನ್ನು ಪೂರೈಸಲು ಸ್ಪಂದಿಸುವ ಆಡಳಿತ ಮತ್ತು ದಕ್ಷ ಸಾರ್ವಜನಿಕ ಸೇವೆ ಒದಗಿಸುವುದು ಆಯೋಗದ ಉದ್ದೇಶವಾಗಿದೆ. ೧೯೪೮ ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆ ಅಂಗೀಕಾರದ ಸ್ಮರಣಾರ್ಥ ೧೯೫೦ ರಿಂದ ಪ್ರತಿವರ್ಷ ಡಿಸೆಂಬರ್ ೧೦ ರಂದು ಮಾನವ ಹಕ್ಕುಗಳ ದಿನ ಆಚರಿಸಲಾಗುತ್ತದೆ.

<><><><>

ಇಂಡಿಗೋ ವಿಮಾನ ಸಂಚಾರ ವಿಳಂಬವಾಗುವ ಸಾಧ್ಯತೆ ಇನ್ನೂ ಇದ್ದು, ಪ್ರಯಾಣಿಕರು ತಮ್ಮ ತಮ್ಮ ವಿಮಾನಯಾನ ಸಂಸ್ಥೆಯೊಂದಿಗೆ ವಿಮಾನ ಹಾರಾಟದ ಸ್ಥಿತಿಗತಿಯ ಬಗ್ಗೆ ಮಾಹಿತಿ ಪಡೆಯುವಂತೆ ದೆಹಲಿ ವಿಮಾನ ನಿಲ್ದಾಣ ಪ್ರಯಾಣಿಕರಿಗೆ ಸೂಚನೆ ನೀಡಿದೆ. ವಿಳಂಬ ತಡೆಗಟ್ಟಲು ಮತ್ತು ಸುಗಮ ಸಂಚಾರಕ್ಕಾಗಿ ಎಲ್ಲಾ ಸಂಬಂಧಿತರೊಂದಿಗೆ ಕಾರ್ಯಪ್ರವೃತ್ತವಾಗಿರುವುದಾಗಿ ಹೇಳಿರುವ ದೆಹಲಿ ವಿಮಾನ ನಿಲ್ದಾಣ ಪ್ರಾಧಿಕಾರವು, ಪ್ರಯಾಣಿಕರು ಹೆಚ್ಚಿನ ವಿವರಗಳಿಗೆ ಮಾಹಿತಿ ಕೇಂದ್ರವನ್ನು ಸಂಪರ್ಕಿಸುವಂತೆ ಮತ್ತು ಅಧಿಕೃತ ಜಾಲತಾಣವನ್ನು ನೋಡುವಂತೆ ಕೋರಿದೆ.

<><><><>

ಶ್ಯೋಕ್ ಸುರಂಗ ಸೇರಿದಂತೆ ಏಳು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಲ್ಲಿ ಗಡಿ ರಸ್ತೆ ಸಂಸ್ಥೆ ನಿರ್ಮಿಸಿರುವ ೧೨೫ ತಾಂತ್ರಿಕ ಮಹತ್ವದ ಮೂಲಸೌಕರ್ಯ ಯೋಜನೆಗಳನ್ನು

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಲಡಾಖ್‌ನಲ್ಲಿನ ಈ ಸುರಂಗವು ವಿಪರೀತ ಚಳಿಗಾಲದಲ್ಲೂ ಉತ್ತಮ ಸಂಪರ್ಕ ಒದಗಿಸಲಿದೆ ಎಂದರು.

<><><>

ಅಹಮದಾಬಾದ್ ನಗರವು ಶೀಘ್ರದಲ್ಲೇ ಜಾಗತಿಕ ಕ್ರೀಡಾ ನಕ್ಷೆಯ ಉತ್ತುಂಗದಲ್ಲಿರಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅಹಮದಾಬಾದ್‌ನಲ್ಲಿ ಇಂದು ಅವರು ವಿವಿಧ ಅಭಿವೃದ್ಧಿ ಕಾರ್ಯಗಳು ಮತ್ತು ನಗರ ಸೌಲಭ್ಯಗಳನ್ನು ಉದ್ಘಾಟಿಸಿದರು. ನಗರ ಪಾಲಿಕೆಯ ವಿವಿಧ ಜನ ಕೇಂದ್ರೀತ ಯೋಜನೆಗಳಿಗೆ ಶಿಲಾನ್ಯಾಸ ಮತ್ತು ಗೋಟಾದಲ್ಲಿ ಕಿರು ಕ್ರೀಡಾ ಸಂಕೀರ್ಣ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು. ಕಳೆದ ಕೆಲವು ವರ್ಷಗಳಿಂದ ವಿಶ್ವದರ್ಜೆಯ ಕ್ರೀಡಾ ಮೂಲಸೌಕರ್ಯ ಮತ್ತು ತರಬೇತಿ ಸೌಲಭ್ಯಗಳ ಅಗಾಧ ವಿಸ್ತರಣೆಯು ಕಂಡು ಬಂದಿದ್ದು, ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೆ ಅಹಮದಾಬಾದ್ ಸಜ್ಜಾಗುತ್ತಿದೆ ಎಂದು ಹೇಳಿದರು.

<><><>

ಅಮೂರ್ತ ಸಾಂಸ್ಕೃತಿಕ ಪರಂಪರೆಯ - ಐಸಿಎಚ್ ಸಂರಕ್ಷಣೆಗಾಗಿ ಅಂತರ-ಸರ್ಕಾರಿ ಸಮಿತಿಯ ೨೦ ನೇ ಸಭೆಯನ್ನು ನವದೆಹಲಿಯ ಕೆಂಪು ಕೋಟೆಯಲ್ಲಿ ನಾಳೆಯಿಂದ ಶನಿವಾರದವರೆಗೆ ಭಾರತ ಆಯೋಜಿಸಲಿದೆ. ಭ್ರಾತೃತ್ವ, ಕರುಣೆ ಮತ್ತು ಸಾಮೂಹಿಕ ಆಚರಣೆಯ ದೀಪಾವಳಿ ಹಬ್ಬವನ್ನು ಈ ವರ್ಷದ ಯುನೆಸ್ಕೋ ಅಮೂರ್ತ ಪರಂಪರೆಯ ಪಟ್ಟಿಗೆ ಭಾರತ ನಾಮನಿರ್ದೇಶನ ಮಾಡಿದೆ. ಯುನೆಸ್ಕೋ ಐಸಿಎಚ್ ಪಟ್ಟಿಗೆ ಸೇರ್ಪಡೆಗೆ ಸಲ್ಲಿಸಲಾಗಿರುವ ನಾಮನಿರ್ದೇಶನಗಳ ಪರಿಶೀಲನೆ ಮತ್ತು ಅಮೂರ್ತ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸಲು ಅಂತಾರಾಷ್ಟ್ರೀಯ ನೆರವು ನೀಡುವುದು ಆರು ದಿನಗಳ ಕಾರ್ಯಕ್ರಮದ ಗುರಿಯಾಗಿದೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ.

<><><>

ಕರ್ನಾಟಕದ ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ನಾಳೆಯಿಂದ ಆರಂಭವಾಗಲಿದೆ. ಒಟ್ಟು ೧೦ ದಿನಗಳ ಅಧಿವೇಶನದಲ್ಲಿ ೨೧ಕ್ಕೂ ಹೆಚ್ಚು ವಿಧೇಯಕಗಳ ಮಂಡನೆಗೆ ಸರ್ಕಾರ ಸಿದ್ಧತೆ ನಡೆಸಿದೆ. ದ್ವೇಷ ಭಾಷಣ ತಡೆಗೆ ಹೊಸ ಕಾನೂನು, ಸಾಮಾಜಿಕ

ಬಹಿಷ್ಕಾರ ಹೇರುವುದನ್ನು ಶಿಕ್ಷಾರ್ಹ ಅಪರಾಧವಾಗಿ ಪರಿಗಣಿಸುವ ಎರಡು ಪ್ರಮುಖ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ. ನಾಯಕತ್ವ ಗೊಂದಲ, ಪಕ್ಷದೊಳಗಿನ ಭಿನ್ನಮತ, ಶಾಸಕರ ದೆಹಲಿ ಯಾತ್ರೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿ ಸರ್ಕಾರವನ್ನು ಮುಜುಗರಕ್ಕೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜಾಗಿವೆ. ಬೆಳಗಾವಿ ಅಧಿವೇಶನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಸುವರ್ಣಸೌಧದಲ್ಲಿ ಮುಖ್ಯಮಂತ್ರಿ, ಸಚಿವರು, ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳ ಕಚೇರಿಗಳ ಸ್ವಚ್ಛತೆ, ಪೀಠೋಪಕರಣ ಅಳವಡಿಕೆ, ಕುಡಿಯುವ ನೀರು, ಊಟದ ವ್ಯವಸ್ಥೆ, ಸಾರಿಗೆ ವ್ಯವಸ್ಥೆ, ಶೌಚಾಲಯ, ದೀಪದ ವ್ಯವಸ್ಥೆ, ಸೇರಿದಂತೆ ತಾಂತ್ರಿಕ ವ್ಯವಸ್ಥೆಗೆ ಕ್ರಮವಹಿಸಿದೆ. ಭದ್ರತಾ ದೃಷ್ಟಿಯಿಂದ ಸುವರ್ಣಸೌಧದ ಒಳಗೂ ಮತ್ತು ಹೊರಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಸುಮಾರು ೮ ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ೧೦ ದಿನಗಳ ಕಾಲ ಸುವರ್ಣ ಸೌಧದ ಸುತ್ತ ಮೂರು ಕಿಲೋ ಮೀಟರ್ ಅಂತರದ ವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅನುಮತಿ ಪಡೆದವರಿಗೆ ಮಾತ್ರ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆಗೆ ಅವಕಾಶ ಕಲ್ಪಿಸಲಾಗಿದೆ. ಅಧಿವೇಶನ ಸಂದರ್ಭದಲ್ಲಿ ಸಭಾಧ್ಯಕ್ಷರ ಸೂಚನೆಗೆ ಮೇರೆಗೆ ಈ ಬಾರಿ ೪೮, ೭೨ ಉದ್ದಳತೆಯ ಬೃಹತ್ ಗಾತ್ರದ ರಾಷ್ಟ್ರ ಧ್ವಜದ ಪ್ರದರ್ಶನ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

<><><><>

ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ ಐ ಆರ್) ಎರಡನೇ ಹಂತದ ಆರಂಭದ ನಂತರ ಈವರೆಗೆ ೫೦ ಕೋಟಿ ೯೪ ಲಕ್ಷ ಅರ್ಜಿಗಳನ್ನು ವಿತರಿಸಲಾಗಿದ್ದು, ಈ ಹಂತದಲ್ಲಿ ಶೇಕಡ ೯೯.೯೪ ರಷ್ಟು ಮತದಾರರ ವಿವರಗಳನ್ನು ಕ್ರೋಢೀಕರಿಸುವ ಗುರಿ ಹೊಂದಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ೯ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕಳೆದ ತಿಂಗಳ ೪ ರಿಂದ ಆರಂಭವಾಗಿರುವ ಎರಡನೇ ಹಂತದಲ್ಲಿ ಈವರೆಗೆ ೫೦ ಕೋಟಿಗೂ ಹೆಚ್ಚು ಅರ್ಜಿಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಎರಡನೇ ಹಂತದಲ್ಲಿ ಛತ್ತೀಸ್‌ಗಢ, ಗೋವಾ, ಗುಜರಾತ್, ಕೇರಳ, ಮಧ್ಯಪ್ರದೇಶ, ರಾಜಸ್ತಾನ, ತಮಿಳುನಾಡು, ಉತ್ತರಪ್ರದೇಶ, ಪಶ್ಚಿಮ ಬಂಗಾಳ, ಪುದುಚೆರಿ, ಲಕ್ಷದ್ವೀಪ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪ ಪ್ರದೇಶಗಳಲ್ಲಿ ಎಸ್‌ಐಆರ್ ಪ್ರಗತಿಯಲ್ಲಿದ್ದು

ಮುಂದಿನ ವರ್ಷದ ಫೆಬ್ರವರಿ ೧೪ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆಯೊಂದಿಗೆ ಬೃಹತ್ ಪ್ರಮಾಣದ ಪರಿಷ್ಕರಣಾ ಕಾರ್ಯ ಮುಕ್ತಾಯಗೊಳ್ಳಲಿದೆ.

<><><>

ವಿಜ್ಞಾನಿಗಳು ಪ್ರಯೋಗಾಲಯಗಳಿಗೂ ಮೀರಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅನುಕೂಲವಾಗುವಂತೆ ನವೀನ ಆವಿಷ್ಕಾರಗಳತ್ತ ಗಮನ ಹರಿಸುವಂತೆ ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಮನವಿ ಮಾಡಿದ್ದಾರೆ. ಪಂಚಕುಲದಲ್ಲಿಂದು ೧೧ನೇ ಭಾರತ ಅಂತಾರಾಷ್ಟ್ರೀಯ ವಿಜ್ಞಾನ ಉತ್ಸವದ ೨ನೇ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಜ್ಞಾನಿಗಳ ಜ್ಞಾನವು ಕೃಷಿಕರ ಇಳುವರಿ ಹೆಚ್ಚಿಸಿದಾಗ, ರೋಗಿಗಳ ಅನಾರೋಗ್ಯ ನಿವಾರಿಸಿದಾಗ ಮತ್ತು ಉದ್ಯಮಿಯಾಗುವಂತಹ ನವೀನ ಆವಿಷ್ಕಾರ ನೀಡಿದಾಗ ವಿಜ್ಞಾನವು ನಿಜವಾದ ಸಮೃದ್ಧಿಯನ್ನು ತರಬಲ್ಲದು ಎಂದರು.

<><><>

ಚೆನ್ನೈನಲ್ಲಿ ಇಂದು ನಡೆಯಲಿರುವ ಎಫ್ ಐ ಹೆಚ್ ಪುರುಷರ ಹಾಕಿ ಜೂನಿಯರ್ ವಿಶ್ವಕಪ್ ೨೦೨೫ ರಲ್ಲಿ ಭಾರತ ಮತ್ತು ಹಾಲಿ ಚಾಂಪಿಯನ್ ಜರ್ಮನಿ ಮುಖಾಮುಖಿಯಾಗಲಿವೆ. ಪಂದ್ಯ, ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಕ್ವಾರ್ಟರ್‌ಫೈನಲ್ ನ ಪೆನಾಲ್ಟಿ ಶೂಟೌಟ್‌ನಲ್ಲಿ ಬೆಲ್ಜಿಯಂ ತಂಡವನ್ನು ಮಣಿಸಿ ಭಾರತ ಸೆಮಿಫೈನಲ್ಸ್ ಪ್ರವೇಶಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>